ಖಾಲಿ ಇರುವ ವೈದ್ಯರ ಹುದ್ದೆಗಳನ್ನು ಗುತ್ತಿಗೆಗೆ ಆಧಾರದ ವೈದ್ಯರನ್ನು ನೇಮಿಸುವ ಮೂಲಕ, ಸ್ನಾತಕೋತ್ತರ ವ್ಯಾಸಂಗದಿಂದ ಹಿಂದಿರುಗುವ ವೈದ್ಯರನ್ನು ನೇಮಿಸುವ ಮೂಲಕ ಮತ್ತು ಕರ್ನಾಟಕ ಲೋಕಸೇವಾ ಆಯೋಗದ ಮೂಲಕ ನೇಮಕ ಮಾಡುವ ಮೂಲಕ ತುಂಬಲು ಈಗಾಗಲೇ ಕ್ರಮ ಕೈಗೊಳ್ಳಲಾಗಿರುತ್ತದೆ.

ಕಿರಿಯ ಆರೋಗ್ಯ ಸಹಾಯಕ:ಸಹಾಯಕಿ, ಪ್ರಥಮ ದರ್ಜೆ ಹುದ್ದೆ ಹಾಗೂ ಇತರೆ ವರ್ಗದ ಖಾಲಿ ಹುದ್ದೆಗಳನ್ನು ತುಂಬಲು ಆರ್ಥಿಕ ಇಲಾಖೆಯು ಈಗಾಗಲೇ ಆರ್ಥಿಕ ನಿರ್ಬಂಧ ಸಡಿಲಗೊಳಿಸಿದ್ದು, ಸಮಾಜ ಕಲ್ಯಾಣ ಇಲಾಖೆಯ ನೇಮಕಾತಿಗೆ ಮೀಸಲಾತಿಯ ಆದೇಶವನ್ನು ಇತ್ತೀಚೆಗೆ ಹೊರಡಿಸಲಾಗಿದ್ದು, ಈ ಉಳಿದ ಸಿಬ್ಬಂದಿಯ ಹುದ್ದೆಗಳನ್ನು ತುಂಬಲು ಆದಷ್ಟು ಕೂಡಲೇ ಕ್ರಮ ಕೈಗೊಳ್ಳಲಾಗುವುದು.

(2) ದ.ಕ. ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯ ನಿರ್ವಹಣಾ ಅಧಿಕಾರಿ ಹುದ್ದೆ ಭರ್ತಿ

ಶ್ರೀ ಯು.ಆರ್. ಸಭಾಪತಿ (ಉಡುಪಿ) : ಮಾನ್ಯ ಸಭಾಧ್ಯಕ್ಷರೇ, ವರ್ಗಾವಣೆಯಿಂದ ಖಾಲಿ ಆಗಿರುವ ದಕ್ಷಿಣ ಕನ್ನಡ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯ ನಿರ್ವಹಣಾ ಅಧಿಕಾರಿ ಹುದ್ದೆ ಹಾಗೂ ಖಾಲಿ ಆಗಿರುವ ಉಡುಪಿ ತಾಲ್ಲೂಕು ಪಂಚಾಯಿತಿ ಸಹಿತ ಇತರ ತಾಲ್ಲೂಕು ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹುದ್ದೆಗಳನ್ನು ಭರ್ತಿ ಮಾಡದೇ ದೈನಂದಿನ ಅಭಿವೃದ್ಧಿ ಕಾರ್ಯಗಳಿಗೆ ತೊಡಕು ಉಂಟಾಗಿದೆ. ಸರ್ಕಾರ ಈ ಬಗ್ಗೆ ಯಾವ ನಿರ್ಧಾರ ಕೈಗೊಳ್ಳುತ್ತದೆ ಎಂದು ಸ್ಪಷ್ಟಪಡಿಸಬೇಕು.

ಶ್ರೀ ಎಂ.ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) : ಮಾನ್ಯ ಅಧ್ಯಕ್ಷರೇ, ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಹೇಳಿಕೆಯನ್ನು ಕೊಡಬಯಸುತ್ತೇನೆ. ದಕ್ಷಿಣ ಕನ್ನಡ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯ ನಿರ್ವಹಣಾ ಅಧಿಕಾರಿ ಹುದ್ದೆಯು ಐಎಎಸ್ ವರ್ಗದ ಹುದ್ದೆಯಾಗಿದ್ದು, ಈ ಹುದ್ದೆಯನ್ನು ಭರ್ತಿ ಮಾಡುವ ಬಗ್ಗೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯು ಕ್ರಮ ಕೈಗೊಳ್ಳುತ್ತದೆ. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಒಟ್ಟು 8 ತಾಲ್ಲೂಕು ಪಂಚಾಯಿತಿಗಳಿದ್ದು, ಎಲ್ಲಾ ತಾಲ್ಲೂಕು ಪಂಚಾಯಿತಿಗಳಿಗೆ ಕಾರ್ಯನಿರ್ವಹಣಾ ಅಧಿಕಾರಿಗಳನ್ನು ನೇಮಕ ಮಾಡಿ ಈಗಾಗಲೇ ಆದೇಶ ಹೊರಡಿಸಲಾಗಿದೆ. ನೇಮಿಸಿರುವ ಸ್ಥಳಗಳಿಗೆ ಕೆಲವು ಅಧಿಕಾರಿಗಳು ಈಗಾಗಲೇ ಹಾಜರಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ನೇಮಿಸಿದ ಸ್ಥಳಕ್ಕೆ ಹಾಜರಾಗದೇ ಇರುವ ಅಧಿಕಾರಿಗಳಿಗೆ ಕೂಡಲೇ ಹಾಜರಾಗಲು ಸೂಚನೆಯನ್ನು ನೀಡಲಾಗಿದೆ. ಗೈರು ಹಾಜರಾದ ಅಧಿಕಾರಿಗಳ ಮೇಲೆ ಶಿಸ್ತಿನ ಕ್ರಮ ಕೈಗೊಳ್ಳುತ್ತೇವೆಂದು ಈ ದಿನವೇ ಎಚ್ಚರಿಕೆ ನೋಟೀಸನ್ನು ಕೊಡಲಾಗಿದೆ.

ಅಧ್ಯಕ್ಷರು : ಅರಗ ಜ್ಞಾನೇಂದ್ರ ಅವರ ಸೂಚನೆಯನ್ನು ಬಾಲಕೃಷ್ಣ ಅವರು ಕೇಳುತ್ತಾರೆ.

(ii) ತೀರ್ಥಹಳ್ಳಿ ತಾಲ್ಲೂಕಿನಲ್ಲಿ ವಿದ್ಯುತ್ ಸರಬರಾಜು

ಶ್ರೀ ಹೆಚ್.ಸಿ. ಬಾಲಕೃಷ್ಣ : ಮಾನ್ಯ ಅಧ್ಯಕ್ಷರೇ, ಶಿವಮೊಗ್ಗ ವಿದ್ಯುತ್ ಇಲಾಖೆಯ ಎಂಆರ್.ಎಸ್‌ನಿಂದ ತೀರ್ಥಹಳ್ಳಿ ತಾಲ್ಲೂಕಿನ ಮಂದಗದ್ದೆವರೆಗೆ ಸುಮಾರು 35 ಕಿ.ಮೀ. 11 ಕೆ.ವಿ.ಎ. ಲೈನ್ ಎಳೆದು ಸುಮಾರು 20 ವರ್ಷಗಳಾಗಿದೆ. ಇದುವರೆಗೂ ಇದರಿಂದ ವಿದ್ಯುತ್ ಸರಬರಾಜು ಮಾಡಿಲ್ಲ. ಬಳಕೆದಾರನಿಗೆ ಕೊಡಲು ಸಾಧ್ಯವಾಗದೇ ಇಲಾಖೆಯ ತಂತಿ ಮತ್ತು ಅವರ ಬೆಲೆ ಬಾಳುವ ವಸ್ತುಗಳು ಕಳ್ಳತನವಾಗಿ ಇಲಾಖೆಗೆ ಅಪಾರ ನಷ್ಟ ಸಂಭವಿಸಿರುತ್ತದೆ. ಸಾರ್ವಜನಿಕರು ಮತ್ತು ಜನಪ್ರತಿನಿಧಿಗಳು ಸಂಬಂಧಿಸಿದ ಅಧಿಕಾರಿಗಳಿಗೆ ತಿಳಿಸಿದಾಗ್ಯೂ ಉಳಿಸಲು ಇದುವರೆಗೂ ಯಾವುದೇ ಕ್ರಮ ಕೈಗೊಂಡಿಲ್ಲ. ಈ ರೀತಿ ಸಾರ್ವಜನಿಕ ಹಣ ನಷ್ಟ ಮಾಡಿದ ಸಂಬಂಧಿಸಿದ